# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 223/2024**

**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 19-02-2026 ರಂದು ಪ್ರಮಾಣ ಮಾಡಿಸಲಾಯಿತು**

| | | | |
|---|---|---|---|
| **ಸಾಕ್ಷಿಯ ಹೆಸರು** | ಃ ಶಂಬೋಜಿ ಸಂಕಪ್ಪನವರ | **ಪ್ರಾ.ಸಾ ಃ 02** |
| **ತಂದೆ ಃ ಗಂಡ ಹೆಸರು** | ಃ ರಾಮಪ್ಪ | **ಚಾ.ಸಾ ಃ 04** |
| **ವಯಸ್ಸು** | ಃ 42 ವರ್ಷ | |
| **ಉದ್ಯೋಗ** | ಃ ವ್ಯವಸಾಯ | |
| **ವಾಸಸ್ಥಳ** | ಃ ತುಮರಿಕೊಪ್ಪ | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ನನಗೆ ಚಾಸಾ-1 ರವರ ಪರಿಚಯ ಇದೆ. ಚಾಸಾ-2 ರಿಂದ 15 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ.

ನನಗೆ ಜಗಳದ ಬಗ್ಗೆ ಯಾವುದೆ ವಿಷಯ ಗೊತ್ತಿಲ್ಲ. ಜಗಳದ ಸಮಯದಲ್ಲಿ ನಾನು ಮನೆಯಲ್ಲಿ ಇರಲಿಲ್ಲ. ನಾನು ಜಗಳವನ್ನು ನೋಡಿಲ್ಲ ಹಾಗೂ ಬಿಡಿಸಿಲ್ಲ. ಈ ಬಗ್ಗೆ ಪೋಲೀಸರ ಮುಂದೆ ಹೇಳಿಕೆ ನೀಡಿಲ್ಲ. ನಾನು ಮುದ್ದೆಮಾಲುಗಳನ್ನು ಈ ಹಿಂದೆ ಎಲ್ಲಿಯೂ ನೋಡಿಲ್ಲ.

***(ಮಾನ್ಯ ಸ.ಸ.ಅ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ,*** *ಪಾಟೀ ಸವಾಲಿಗೆ ಅನುಮತಿಸಿದೆ)*

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕ 07.03.2023 ರಂದು ಹೋಳಿ ಹುಣ್ಣಿಮೆ ದಿನದಂದು ಓಕಳಿ ಆಡುವ ದಿನದಂದು ನಮ್ಮ ಓಣಿಯಲ್ಲಿ ಬಾಜು ಓಣಿಯು ಆರೋಪಿತರು ಬಣ್ಣ ಆಡುತ್ತಾ ನಮ್ಮ ಓಣಿಯಲ್ಲಿ ಬಂದಿದ್ದರು ಅಂದರೆ ಸರಿಯಲ್ಲ. ನಾನು ಆರೋಪಿತರಿಗೆ ಬಣ್ಣ ಹಾಕಬೇಡರಿ ಎಂದು ಹೇಳಿದರೂ ಕೂಡಾ ನನ್ನ ಮೇಲೆ ಬಣ್ಣ ಹಾಕಿರುತ್ತಾರೆ ಅಂದರೆ ಸರಿಯಲ್ಲ. 2 ರಿಂದ 9 ನೇ ಆರೋಪಿತರು 1 ನೇ ಆರೋಪಿ ಜೊತೆಗೆ ಬಂದಿದ್ದು ನನ್ನ ಜೊತೆಗೆ ಜಗಳ ಮಾಡಿ ನನಗೆ ಕೈಯಿಂದ ಹೊಡಿ ಬಡಿ ಮಾಡಿರುತ್ತಾರೆ ಅಂದರೆ ಸರಿಯಲ್ಲ. ಚಾಸಾ-1, 5 ರಿಂದ 15 ರವರು ಸ್ಥಳಕ್ಕೆ ಬಂದು ಜಗಳ ಬಿಡಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರು ಜಗಳ ಬಿಡಿಸಲು ಬಂದವರೆಗೆ ನಿಮಗೇನೂ ಸಂಬಂಧ ಜಗಳ ಬಿಡಿಸಲು ನೀವು ಏಕೆ ಬಂದಿದ್ದಿರಿ ಎಂದು ಅವರ ಜೊತೆಗೂ ಜಗಳ ಮಾಡಿರುತ್ತಾರೆ ಅಂದರೆ ಸರಿಯಲ್ಲ. ಚಾಸಾ-8 ರವರು ಜಗಳ ಬಡಿಸಲು ಬಂದಾಗ 1 ನೇ ಆರೋಪಿಯು ಕಲ್ಲಿನಿಂದ ಚಾಸಾ-8 ರವರ ತಲೆಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ಸರಿಯಲ್ಲ. 2 ನೇ ಆರೋಪಿ ಕಾಡಾ ಚಾಸಾ-8 ರವರ ಮೇಲೆ ಕಲ್ಲಿನಿಂದ ಹಲ್ಲೆ ಮಾಡಿರುತ್ತಾರೆ ಅಂದರೆ ಸರಿಯಲ್ಲ. ಆ ಸಮಯದಲ್ಲಿ 1 ನೇ ಆರೋಪಿ ಚಾಸಾ-8 ರವರಿಗೆ ನಿನಗೆ ಸೊಕ್ಕು ಬಹಳ ಇದೆ ಸೂಳೆಮಗನೆ ಎಂದು ತನ್ನ ಕೈಯಲ್ಲಿದ್ದ ಕಲ್ಲಿನಿಂದ ಎದೆಗೆ ಹೊಡೆದಿರುತ್ತಾನೆ ಅಂದರೆ ಸರಿಯಲ್ಲ. 2 ನೇ ಆರೋಪಿ ಜಗಳ ಬಿಡಿಸಲು ಬಂದ ಚಾಸಾ-5 ರವರಿಗೆ ಕಲ್ಲಿನಿಂದ ಕಾಲಿಗೆ ಹೊಡೆದು ರಕ್ತಗಾಯ

ಪಡಿಸಿರುತ್ತಾನೆ ಅಂದರೆ ಸರಿಯಲ್ಲ. ಚಾಸಾ-6 ರವರ ತಲೆಗೆ 2ನೇ ಆರೋಪಿ ಕಲ್ಲಿನಿಂದ ತಲೆಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ಸರಿಯಲ್ಲ. ಉಳಿದ ಆರೋಪಿತರು ತಮ್ಮ ಕೈಗಳಿಂದ ಹೊಡಿ ಬಡಿ ಮಾಡಿರುತ್ತಾರೆ ಅಂದರೆ ಸರಿಯಲ್ಲ. 2ನೇ ಆರೋಪಿ ಚಾಸಾ-1 ರವರ ಸೀರೆ ಹಿಡಿದು ಎಳೆದಾಡಿ ಸಾರ್ವಜನಿಕವಾಗಿ ಮಾನಭಂಗ ಮಾಡಿರುತ್ತಾನೆ ಹಾಗೂ ಅವಾಚ್ಯ ಶಬ್ದಗಳಿಂದ ಬೈದಿರುತ್ತಾನೆ ಅಂದರೆ ಸರಿಯಲ್ಲ. ಚಾಸಾ-11 ರವರಿಗೆ 1ನೇ ಆರೋಪಿ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ಸರಿಯಲ್ಲ. ಉಳಿದ ಆರೋಪಿತರು ತಮ್ಮ ಕೈಯಿಂದ, ಬಡಿಗೆಯಿಂದ ಚಾಸಾ-7 ರವರಿಗೆ ಮೈಕೈಗಳಿಗೆ ಹಲ್ಲೆ ಮಾಡಿರುತ್ತಾರೆ ಅಂದರೆ ಸರಿಯಲ್ಲ. 3ನೇ ಆರೋಪಿಯು ಚಾಸಾ-9 ರವರ ಮೇಲೆ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ಸರಿಯಲ್ಲ. 4ನೇ ಆರೋಪಿ ಬಡಿಗೆಯಿಂದ ಚಾಸಾ-10 ರವರ ಮೇಲೆ ಹಲ್ಲೆ ಮಾಡಿರುತ್ತಾನೆ ಅಂದರೆ ಸರಿಯಲ್ಲ. 7 ನೇ ಆರೋಪಿಯು ಚಾಸಾ-13 ರವರಿಗೆ ತನ್ನ ಕೈಯಲ್ಲಿದ್ದ ಬಡಿಗೆ ಹಾಗೂ ಕೈಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ಸರಿಯಲ್ಲ. 5 ಮತ್ತು 6 ನೇ ಆರೋಪಿತರು ತಮ್ಮ ಕೈಯಲ್ಲಿ ಇದ್ದ ಬಡಿಗೆಯಿಂದ ಚಾಸಾ-12 ರವರೆಗೆ ಕೈಗಳಿಂದ ಮತ್ತು ಬಡಿಗೆಗಳಿಂದ ಹೊಡೆದು ಗಾಯ ಪಡಿಸಿರುತ್ತಾರೆ ಅಂದರೆ ಸರಿಯಲ್ಲ. 1 ಮತ್ತು 2ನೇ ಆರೋಪಿತರು ಚಾಸಾ-1 ರವರ ಮೈಮೇಲೆ ಹಲ್ಲೆ ಮಾಡಿ ಸೀರೆ ಹಿಡಿದು ಎಳೆದಾಡಿ ಮಾನಭಂಗ ಮಾಡಿರುತ್ತಾರೆ ಅಂದರೆ ಸರಿಯಲಲ. ಆರೋಪಿತರು ಅವಾಚ್ಯ ಶಬ್ದಗಳಿಂದೆ ಬೈಯುತ್ತಿದ್ದರು ಅಂದರೆ ಸರಿಯಲ್ಲ. ಚಾಸಾ-5 ರಿಂದ 15 ರವರು ಜಗಳ ಬಡಿಸಿ ಹೋಗುವಾಗ ಆರೋಪಿತರು ಈಗ ಉಳಿದುಕೊಂಡಿದ್ದಿರಿ ಇನ್ನೊಮ್ಮೆ ಸಿಕ್ಕರೆ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿರುತ್ತಾರೆ ಅಂದರೆ ಸರಿಯಲ್ಲ. ಈ ಬಗ್ಗ ಚಾಸಾ-1 ರವರು ದೂರು ನೀಡಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರು ನಮ್ಮ ಊರಿನವರು ಹಾಗೂ ನಮ್ಮ ಪಕ್ಕದ ಓಣಿಯವರು ಆದ್ದರಿಂದ ಅವರಿಗೆ ಸಹಾಯ ಮಾಡುವ ಸಲುವಾಗಿ ನಾನು ಜಗಳವನ್ನು ನೋಡಿಲ್ಲ ಹಾಗೂ ಬಿಡಿಸಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಮುದ್ದೆಮಾಲು-1 ಮತ್ತು 2 ರಿಂದ ಆರೋಪಿತರು ಹಲ್ಲೆ ಮಾಡಿದ್ದು ಅದನ್ನು ನೋಡಿದ್ದರೂ ಕೂಡಾ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಘಟನೆ ಬಗ್ಗ ಪೋಲೀಸರ ಮುಂದೆ ನಿಪಿ-4 ರಂತೆ ಹೇಳಿಕೆ ನೀಡಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರಃ**

ಏನು ಇಲ್ಲ

**ಮರು ವಿಚಾರಣೆಃ** ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೆ ಸರಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು,**
**ಕಲಘಟಗಿ.**